**ದಿನಾಂಕಃ 18-02-2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಂದುವರೆದ ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರು ಅವರಿಂದಃ`**

ಘಟನಾ ಸ್ಥಳವು ಚಾಸಾ-1 ರವರಿಗೆ ಸಂಬಂದಪಟ್ಟದ್ದಾಗಿರುತ್ತದೆ ನಿ ಪಿ -2 ರಲ್ಲಿ ಕಾಣಿಸುತ್ತಿರುವ ಬೈಕು ಪಂಚನಾಮೆ ಮಾಡುವ ಸಮಯದಲ್ಲಿ ಇತ್ತು ಎಂದರೆ ಸರಿ.

**ಪಾಟೀ ಸವಾಲುಃ 2 ನೇ ಆರೋಪಿತನ ಪರ ಶ್ರೀ ಸಿ ಬಿ ಕೆ ವಕೀಲರಿಂದಃ**

ಪಂಚನಾಮೆ ಮಾಡುವ ಪೂರ್ವದಲ್ಲಿ ನನಗೆ ಪೋಲಿಸರು ನೋಟಿಸು ಕೊಟ್ಟಿರುವುದಿಲ್ಲ. ಪಂಚನಾಮೆಯಲ್ಲಿ ತೋರಿಸಿದ ಸ್ಥಳದ ಸರ್ವೆ ನಂಬರು ಹೇಳಲು ಬರುವುದಿಲ್ಲ. ಪಂಚನಾಮೆಯನ್ನು ಯಾವ ದಿನಾಂಕದಂದು ಮಾಡಿದರು ಎಂದು ನನಗೆ ಹೇಳಲು ಬರುವುದಿಲ್ಲ. ಪಂಚನಾಮೆಗೆ ಮಾಹಿತಿಯನ್ನು ಯಾರು ಕೊಟ್ಟರು ಎಂದರೆ ನನಗೆ ಗೊತ್ತಿಲ್ಲ. ಪಂಚನಾಮೆಗೆ ಪೋಲಿಸರು ಸಹಿ ಮಾಡು ಎಂದು ಹೇಳಿದ್ದರಿಂದ ನಾನು ಹೇಳಿರುತ್ತೇನೆ. ಘಟನಾ ಸ್ಥಳದಲ್ಲಿದ್ದ ಬೈಕಿನ ನಂಬರು ಹೇಳಲು ಬರುವುದಿಲ್ಲ. ಅದು ಯಾವ ಬಣ್ಣದ್ದು ಇತ್ತು ಎಂದು ನನಗೆ ಹೇಳಲು ಬರುವುದಿಲ್ಲ. ನನ್ನ ಸಮಕ್ಷಮ ಬೈಕು ಜಪ್ತಿ ಮಾಡಿಲ್ಲ ಎಂದರೆ ಸರಿಯಲ್ಲ. ಹಾಗೆಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನಗೆ ಯಾವುದೇ ಮಾಹಿತಿ ಇಲ್ಲದಿದ್ದರೂ ಸಹ ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ 3 ನೇ ಆರೋಪಿ ಪರ ಶ್ರೀ ಎಸ್ ಎನ್ ಕೆ ವಕೀಲರಿಂದಃ**

ಪಂಚನಾಮೆಯನ್ನು ಮತ್ತು ಪೋಟೋವನ್ನು ಯಾವ ಉದ್ದೇಶಕ್ಕಾಗಿ ತೆಗೆದರು ಎಂದರೆ ಪೋಲಿಸರು ಕರೆದರು ಅ ಕಾರಣ ಹೋಗಿ ಸಹಿ ಮಾಡಿರುತ್ತೇವೆ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ. ಹೇ. ಕೇ. ಸರಿ ಇದೆ.

ಸಹಿ/-

(ಶ್ರೀಮತಿ ಹುಲ್ಲೂರ ಹೇಮಲತಾ ಬಸಪ್ಪ)
ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು,
ರಾಣೇಬೆನ್ನೂರು.